ಇ) 'ಆ' ಗೆ ನೀಡಿರುವ ಉತ್ತರದಿಂದಾಗಿ ಉದ್ಭವಿಸುವುದಿಲ್ಲ.

ಈ) 'ಆ' ಗೆ ನೀಡಿರುವ ಉತ್ತರದಿಂದಾಗಿ ಉದ್ಭವಿಸುವುದಿಲ್ಲ.

ರಾಜ್ಯದಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಹಾಗೂ ಆಸ್ಪತ್ರೆಗಳಲ್ಲಿ ಗೌರವ ಸೂಪರ್‌ಸ್ಪೆಶಾಲಿಸ್ಟ್ ವೈದ್ಯರ ನೇಮಕ

2035(2178) ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) : ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ ಸರ್ಕಾರಿ ಮೆಡಿಕಲ್ ಕಾಲೇಜು ಹಾಗೂ ಆಸ್ಪತ್ರೆಗಳಲ್ಲಿ ಸೂಪರ್ ಸ್ಪೆಶಲಿಸ್ಟ್ ವೈದ್ಯರ ಕೊರತೆ ಇರುವ ಸಂಗತಿ ನಿಜವೇ ;

ಆ) ಹಾಗಿದ್ದಲ್ಲಿ, ಖಾಸಗಿ ಸೂಪರ್ ಸ್ಪೆಶಲಿಸ್ಟ್ ವೈದ್ಯರನ್ನು ಸರ್ಕಾರಿ ಮೆಡಿಕಲ್ ಕಾಲೇಜು ಹಾಗೂ ಆಸ್ಪತ್ರೆಗಳಲ್ಲಿ ಗೌರವ ವೈದ್ಯರಾಗಿ ನೇಮಿಸಿಕೊಳ್ಳಲು ಕ್ರಮ ಕೈಗೊಳ್ಳಲಾಗುವುದೇ?

ಡಾ।। ಎ.ಬಿ. ಮಾಲಕರೆಡ್ಡಿ (ವೈದ್ಯಕೀಯ ಶಿಕ್ಷಣ ಸಚಿವರು):

ಅ) ಹೌದು

ಆ) ಹೌದು

ರಾಜ್ಯದ ಜಿಲ್ಲಾ ಸಾರ್ವಜನಿಕ ಆಸ್ಪತ್ರೆಗಳನ್ನು ಖಾಸಗಿ ವೈದ್ಯಕೀಯ ಕಾಲೇಜಿನವರಿಗೆ ಉಪಯೋಗ ಮಾಡಲು ಅನುಮತಿ ನೀಡಿರುವ ಬಗ್ಗೆ

2036(2179) ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) : ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ ಎಷ್ಟು ಖಾಸಗಿ ಮೆಡಿಕಲ್ ಕಾಲೇಜಿನವರು ಜಿಲ್ಲಾ ಕೇಂದ್ರಗಳಲ್ಲಿರುವ ಜಿಲ್ಲಾ ಸಾರ್ವಜನಿಕ ಆಸ್ಪತ್ರೆಗಳನ್ನು ಉಪಯೋಗ ಮಾಡುತ್ತಿರುವರು ;(ವಿವರ ನೀಡುವುದು);

ಆ) ಈ ಖಾಸಗಿ ವೈದ್ಯಕೀಯ ಕಾಲೇಜಿನವರಿಗೆ ಯಾವ ಷರತ್ತುಗಳ ಮೇಲೆ ಈ ಆಸ್ಪತ್ರೆಗಳ ಉಪಯೋಗ ಮಾಡಲು ಅನುಮತಿ ಕೊಡಲಾಗಿದೆ;

ಇ) ಈ ಖಾಸಗಿ ವೈದ್ಯಕೀಯ ಕಾಲೇಜಿನವರಿಗೆ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಹ ಉಪಯೋಗ ಮಾಡಲು ಅನುಮತಿ ಕೊಡುವ ಸಂಗತಿ ನಿಜವೇ ;

ಈ) ಹಾಗಿದ್ದಲ್ಲಿ, ಈ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ?

ಡಾ।। ಎ.ಬಿ. ಮಾಲಕರೆಡ್ಡಿ(ವೈದ್ಯಕೀಯ ಶಿಕ್ಷಣ ಸಚಿವರು):

ಅ)

ಕ್ರ.ಸ	ಕಾಲೇಜಿನ ಹೆಸರು	ಆಸ್ಪತ್ರೆಯ ಹೆಸರು
1	2	3
1.	ಎಂ.ಆರ್. ವೈದ್ಯಕೀಯ ಕಾಲೇಜು, ಗುಲ್ಬರ್ಗಾ	ಜಿಲ್ಲಾ ಆಸ್ಪತ್ರೆ, ಗುಲ್ಬರ್ಗಾ
2.	ಜೆ.ಎನ್. ವೈದ್ಯಕೀಯ ಕಾಲೇಜು, ಬೆಳಗಾಂ	ಜಿಲ್ಲಾ ಆಸ್ಪತ್ರೆ, ಬೆಳಗಾಂ
3.	ಜೆ.ಜೆ.ಎಂ. ವೈದ್ಯಕೀಯ ಕಾಲೇಜು, ದಾವಣಗೆರೆ	ಸಿ.ಜಿ.ಆಸ್ಪತ್ರೆ, ದಾವಣಗೆರೆ
4.	ಕಸ್ತೂರ್‌ಬಾ ವೈದ್ಯಕೀಯ ಕಾಲೇಜು, ಮಂಗಳೂರು	ವೆನ್‌ಲಾಕ್ ಆಸ್ಪತ್ರೆ, ಮಂಗಳೂರು
5.	ಸಿದ್ಧಾರ್ಥ ವೈದ್ಯಕೀಯ ಕಾಲೇಜು, ತುಮಕೂರು	ಜಿಲ್ಲಾ ಆಸ್ಪತ್ರೆ, ತುಮಕೂರು